# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ:15ನೇ ನವೆಂಬರ್, 2017**
**(ಸಮಯ: ಬೆಳಗ್ಗೆ:11.00 ಗಂಟೆಗೆ)**

******

### 01. ಪ್ರಶ್ನೋತ್ತರ

**ಅ)** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೆಯ ಪಟ್ಟಿ

**ಆ)** ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತಾರನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ **2017ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕವನ್ನು** ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.

### 03. ಅರ್ಜಿಯನ್ನೊಪ್ಪಿಸುವುದು

**ಶ್ರೀ ಬಿ.ಜೆ. ಪುಟ್ಟಸ್ವಾಮಿ** ಅವರು ಬಿ.ಬಿ.ಎಂ.ಪಿ. ವಾರ್ಡ್ ನಂ.18ರ ಆರ್.ಎಂ.ವಿ. 2ನೇ ಹಂತ, ಹೆಚ್.ಐ.ಜಿ. ಡಾಲರ್ಸ್ ಕಾಲೋನಿ, ಬುಲ್ಲೇ ವಾರ್ಡ್ ಉದ್ಯಾನವನದ ಮಧ್ಯ ಭಾಗದಲ್ಲಿ 7ನೇ ಕ್ರಾಸ್‌ನಿಂದ ರಾಜಕಾಲುವೆಯವರೆಗೆ (3ನೇ ಮತ್ತು 4ನೇ ಮುಖ್ಯರಸ್ತೆ ಮಧ್ಯೆ) ಹಾದು ಹೋಗುವ ಮೋರಿಯನ್ನು ಮುಚ್ಚುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

### 04. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**01. ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ವಿಧೇಯಕ, 2017**

**ಶ್ರೀ ಹೆಚ್.ಎಂ. ರೇವಣ್ಣ** (ಮಾನ್ಯ ಸಾರಿಗೆ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦2. ಕರ್ನಾಟಕ ಸಾರ್ವಜನಿಕ ಸುರಕ್ಷೆಯ (ಕ್ರಮಗಳ) ಜಾರಿ ವಿಧೇಯಕ, 2017**

**ಶ್ರೀ ರಾಮಲಿಂಗರೆಡ್ಡಿ** (ಮಾನ್ಯ ಗೃಹ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸುರಕ್ಷೆಯ (ಕ್ರಮಗಳ) ಜಾರಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦5. ನಿಯಮ 33೦ರ ಮೇರೆಗೆ

ಅ. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ರಾಜ್ಯದಲ್ಲಿ ಆಕಸ್ಮಿಕ ಅವಘಡ, ಪ್ರಾಕೃತಿಕ ವಿಪತ್ತುಗಳು ಸಂಭವಿಸಿದಲ್ಲಿ ಮೃತರಾಗುತ್ತಿರುವ ನಾಗರೀಕರಿಗೆ ಸಮಾನವಾಗಿ ಪರಿಹಾರ ಒದಗಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

ಆ. **ಶ್ರೀ ಬಿ.ಜೆ. ಪುಟ್ಟಸ್ವಾಮಿ** ಅವರು ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿರುವ ಆಪ್ತ ಸಹಾಯಕರುಗಳಿಗೆ ಕಳೆದ ಎಂಟು-ಒಂಭತ್ತು ತಿಂಗಳುಗಳಿಂದ ವೇತನ ನೀಡದಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

## ೦6. ಗಮನ ಸೆಳೆಯುವ ಸೂಚನೆಗಳು

ಅ. **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಿಗೆ ರಸ್ತೆ, ಕುಡಿಯುವ ನೀರು, ನೈರ್ಮಲ್ಯ ವಿಲೇವಾರಿ ಮುಂತಾದ ಕನಿಷ್ಟ ಮೂಲಭೂತ ಸೌಲಭ್ಯಗಳ ನಿರ್ವಹಣೆಯ ಕೊರತೆಯಿಂದಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವ ಬಗ್ಗೆ **ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರ** ಗಮನ ಸೆಳೆಯುವುದು.

ಆ. **ಶ್ರೀ ಕೆ.ಬಿ. ಶಾಣಪ್ಪ** ಅವರು ಹೈದರಾಬಾದ್-ಕರ್ನಾಟಕದ ಆರು ಜಿಲ್ಲೆಗಳಿಗೆ 371(ಜೆ) ಸಂವಿಧಾನದ 71 ವಿಶೇಷ ಸ್ಥಾನಮಾನ ಕೊಟ್ಟರೂ ಸಹ ಇದುವರೆವಿಗೂ ಯಾವುದೇ ಪ್ರಕಾರದ ನೇಮಕಾತಿ ಪ್ರಕ್ರಿಯೆ ನಡೆಯದೇ ಇರುವುದರಿಂದ ಸರ್ಕಾರದ ನಿಯಮದ ಪ್ರಕಾರ ವಯೋಮಿತಿಯನ್ನು ಸಡಿಲಗೊಳಿಸಿ, ಬೇರೆ ರಾಜ್ಯಗಳಲ್ಲಿ ಪ್ರತಿ ವರ್ಗದ ಅಭ್ಯರ್ಥಿಗಳಿಗೆ 2 ವರ್ಷಗಳ ವಯೋಮಿತಿಯನ್ನು ಸಡಿಲಿಸಿರುವಂತೆ ನಮ್ಮ ರಾಜ್ಯದಲ್ಲಿಯೂ ಜಾರಿಗೊಳಿಸುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---